ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

AU – 4J Part – IVA	ಬೆಂಗಳೂರು, ಸೋಮವಾರ,19,ಅಕ್ಟೋಬರ್, 2020(ಆಶ್ವಯುಜ, 27, ಶಕವರ್ಷ ೧೯೪2) Bengaluru, MONDAY, 19, OCTOBER, 2020(Aashwayuja,27, ShakaVarsha 1942)	ನಂ. 466 No. 466

DEPARTMENT OF PARLIAMENTARY AFFAIRS AND LEGISLATION

SECRETARIAT

NOTIFICATION

NO: DPAL 74 SHASANA 2020, BENGALURU, DATED:19.10.2020

The Karnataka Town and Country Planning (Fourth Amendment) Bill, 2020 ಇದಕ್ಕೆ 2020ರ ಅಕ್ಟೋಬರ್ ತಿಂಗಳ 16ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ 1ಸಂಖ್ಯೆ: 25 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

KARNATAKA ACT NO. 25 OF 2020

(First published in the Karnataka Gazette Extra-ordinary on the 19th day of October, 2020)

THE KARNATAKA TOWN AND COUNTRY PLANNING (FOURTH AMENDMENT) ACT, 2020

(Received the assent of the Governor on the 16th day of October, 2020)

An Act further to amend the Karnataka Town and Country Planning Act, 1961 (Karnataka Act 11 of 1963) and for matters connected therewith or incidental thereto;

Whereas it is expedient further to amend the Karnataka Town and Country Planning Act, 1961 (Karnataka Act 11 of 1963) for the purposes hereinafter appearing;

Be it enacted by the Karnataka State Legislature in the seventy first year of the Republic of India, as follows:-

1. Short title and commencement.- (1) This Act may be called the Karnataka Town and Country Planning (Fourth Amendment) Act, 2020.

(2) It shall be deemed to have come into force with effect from the 31st day of July, 2020.

2. Insertion of new section 18-B.- After section 18-A of the Karnataka Town and Country Planning Act, 1961 (Karnataka Act 11 of 1963) (hereinafter referred to as the principal Act), the following shall be inserted, namely:-

"18-B. Levy of premium charges for grant of Premium Floor Area Ratio.- (1) The Authority may grant permission for premium floor area ratio in the areas identified for the purpose in the Zonal regulations of the master plan.

(2) Where an application is made for grant of permission for utilization of premium floor area ratio for the development of a building under section 15, the Authority may levy premium charges, at such rate, not less than fifty percent of the estimated increase in value of land and building as may be prescribed by the Government from time to time, for grant of premium floor area ratio, not exceeding the limits as specified in the zonal regulations of the master plan.

Explanation: For the purpose of this section, "premium floor area ratio" means additional floor area ratio permitted over and above the ordinary permissible floor area ratio."

3. Repeal and savings.- (1) The Karnataka Town and Country Planning (Second Amendment) Ordinance, 2020 (Karnataka Ordinance 16 of 2020) is hereby repealed.

(2) Notwithstanding such repeal, anything done or any action taken under the principal Act, as amended by the said Ordinance, shall be deemed to have been done or taken under principal Act, as amended by this Act.

By Order and in the name of
the Governor of Karnataka,

(K.DWARAKANATH BABU)
Secretary to Government
Department of Parliamentary Affairs
and Legislation

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

ಅಧಿಸೂಚನೆ

ಸಂಖ್ಯೆ: ಸಂವ್ಯಶಾಇ 71 ಶಾಸನ 2020, ಬೆಂಗಳೂರು, ದಿನಾಂಕ:19.10.2020.

The Karnataka Town and Country Planning (Fourth Amendment) Bill, 2020 ಇದಕ್ಕೆ 2020ರ ಅಕ್ಟೋಬರ್ ತಿಂಗಳ 16ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2020ರ ಕರ್ನಾಟಕ ಅಧಿನಿಯಮ ಸಂಖ್ಯೆ: 25 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

2020 ರ ಕರ್ನಾಟಕ ಅಧಿನಿಯಮ ಸಂಖ್ಯೆ: 25

(2020 ರ ಅಕ್ಟೋಬರ್ ತಿಂಗಳ 19 ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ನಾಲ್ಕನೇ ತಿದ್ದುಪಡಿ) ಅಧಿನಿಯಮ, 2020

(2020 ರ ಅಕ್ಟೋಬರ್ ತಿಂಗಳ 16 ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961ನ್ನು (1963ರ ಕರ್ನಾಟಕ ಅಧಿನಿಯಮ 11) ಮತ್ತಷ್ಟು ತಿದ್ದುಪಡಿ ಮಾಡಲು ಹಾಗೂ ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ ಒಂದು ಅಧಿನಿಯಮ;

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961ನ್ನು (1963ರ ಕರ್ನಾಟಕ ಅಧಿನಿಯಮ 11) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೊಂದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ನಾಲ್ಕನೇ ತಿದ್ದುಪಡಿ) ಅಧಿನಿಯಮ 2020 ಎಂದು ಕರೆಯತಕ್ಕದ್ದು.

   (2) ಇದು 2020ರ ಜುಲೈ 31ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. **18-ಬಿ ಹೊಸ ಪ್ರಕರಣದ ಸೇರ್ಪಡೆ.-** ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961ರ (1963ರ ಕರ್ನಾಟಕ ಅಧಿನಿಯಮ 11) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 18-ಎ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"18-ಬಿ. ಪ್ರೀಮಿಯಮ್ ನೆಲ ವಿಸ್ತೀರ್ಣ ಅನುಪಾತ (premium floor area ratio) ಮಂಜೂರಾತಿಗಾಗಿ ಪ್ರೀಮಿಯಮ್ ಚಾರ್ಜುಗಳನ್ನು ವಿಧಿಸುವುದು.- (1) ಪ್ರಾಧಿಕಾರವು ಮಾಸ್ಟರ್ ಪ್ಲಾನ್‌ನ ವಲಯವಾರು ವಿನಿಯಮಗಳಲ್ಲಿನ ಉದ್ದೇಶಕ್ಕಾಗಿ ಗುರುತಿಸಲಾದ ಪ್ರದೇಶಗಳಲ್ಲಿ ಪ್ರೀಮಿಯಮ್ ನೆಲ ವಿಸ್ತೀರ್ಣ ಅನುಪಾತಕ್ಕಾಗಿ ಅನುಮತಿಯನ್ನು ನೀಡಬಹುದು.

(2) 15ನೇ ಪ್ರಕರಣದ ಅಡಿಯಲ್ಲಿ ಕಟ್ಟಡದ ಅಭಿವೃದ್ಧಿಗಾಗಿ ಪ್ರೀಮಿಯಮ್ ನೆಲ ವಿಸ್ತೀರ್ಣ ಅನುಪಾತದ ಬಳಕೆಗಾಗಿ ಅನುಮತಿಯನ್ನು ನೀಡುವುದಕ್ಕಾಗಿ ಅರ್ಜಿಯನ್ನು ಸಲ್ಲಿಸಿದಲ್ಲಿ, ಪ್ರಾಧಿಕಾರವು, ಮಾಸ್ಟರ್ ಪ್ಲಾನ್‌ನ ವಲಯವಾರು ವಿನಿಯಮಗಳಲ್ಲಿ ನಿರ್ದಿಷ್ಟಪಡಿಸಿದ ಮಿತಿಗಳನ್ನು ಮೀರದಂತೆ, ಪ್ರೀಮಿಯಮ್ ನೆಲ ವಿಸ್ತೀರ್ಣ ಅನುಪಾತದ ಮಂಜೂರಾತಿಗಾಗಿ,

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**

ಕಾಲಕಾಲಕ್ಕೆ ಸರ್ಕಾರವು ನಿಯಮಿಸಬಹುದಾದಂತೆ ಭೂಮಿ ಮತ್ತು ಕಟ್ಟಡದ ಮೌಲ್ಯದಲ್ಲಿ ಅಂದಾಜುಮಾಡಿದ ಹೆಚ್ಚಳದ ಶೇಕಡಾ ಐವತ್ತಕ್ಕಿಂತ ಕಡಿಮೆಯಲ್ಲದ ಅಂಥ ದರದಲ್ಲಿ ಪ್ರೀಮಿಯಮ್ ಚಾರ್ಜುಗಳನ್ನು ವಿಧಿಸಬಹುದು.

ವಿವರಣೆ: ಈ ಪ್ರಕರಣದ ಉದ್ದೇಶಕ್ಕಾಗಿ "ಪ್ರೀಮಿಯಮ್ ನೆಲ ವಿಸ್ತೀರ್ಣ ಅನುಪಾತ" ಎಂದರೆ ಸಾಮಾನ್ಯವಾಗಿ ಅನುಮತಿಸಬಹುದಾದ ನೆಲ ವಿಸ್ತೀರ್ಣ ಅನುಪಾತಕ್ಕಿಂತ ಮೇಲೆ ಅನುಮತಿಸಿದ ಹೆಚ್ಚುವರಿ ನೆಲ ವಿಸ್ತೀರ್ಣ ಅನುಪಾತ."

3. ನಿರಸನ ಮತ್ತು ಉಳಿಸುವಿಕೆಗಳು.- (1) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ಎರಡನೇ ತಿದ್ದುಪಡಿ) ಅಧ್ಯಾದೇಶ, 2020ನ್ನು (2020ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 16) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ, ಸದರಿ ಅಧ್ಯಾದೇಶದ ಮೂಲಕ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು, ಈ ಅಧಿನಿಯಮದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

The above translation of the Karnataka Town and Country Planning (Fourth Amendment) Act, 2020 (Karnataka Act 25 of 2020) shall be authoritative text in the Kannada language under section 5A of the Karnataka Official Language Act, 1963 (Karnataka Act 26 of 1963).

ವಜುಬಾಯಿ ವಾಲ
ಕರ್ನಾಟಕ ರಾಜ್ಯಪಾಲರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ. ದ್ವಾರಕನಾಥ್ ಬಾಬು)
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು.

SUNIL GARDE